## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ನೂತನವಾಗಿ ಸೃಜಿಸಲಾಗಿರುವ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ವೃತ್ತ ಕಛೇರಿ ವಿಭಾಗಗಳು ಹಾಗೂ ಉಪ ವಿಭಾಗಗಳಿಗೆ ಕಂಪ್ಯೂಟರ್ ಹಾಗೂ ಪೀಠೋಪಕರಣಗಳ ಖರೀದಿಗಾಗಿ 2014-15ನೇ ಸಾಲಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:-
1) ಸರ್ಕಾರದ ಆದೇಶ ಸಂ.ಗ್ರಾಅಪ/56/ಗ್ರಾನೀಸ(2)2013, ದಿನಾಂಕ:04.3.2014
2) 2014-15ನೇ ಸಾಲಿನಲ್ಲಿ ಆಯವ್ಯಯದಡಿ ಒದಗಿಸಿರುವ ಅಂದಾಜಿನಲ್ಲಿ ಅನುದಾನ
3) ಸರ್ಕಾರದ ಆದೇಶ ಸಂ.ಗ್ರಾಕುನೀ/38/ನೈಇ/2014, ದಿನಾಂಕ: 18.10.2014.

**ಪೀಠಿಕೆ:**

ಮೇಲೆ ಓದಲಾದ (1) ರ ಆದೇಶದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯನ್ನು ಹೊಸದಾಗಿ ಸೃಜಿಸಲಾಗಿದ್ದು, ಕಾರ್ಯಾಚರಣೆ ಮತ್ತು ನಿರ್ವಹಣೆಗಾಗಿ ಓದಲಾದ (2) ಪ್ರಕಾರ 2014-15ನೇ ಸಾಲಿನ ಆಯವ್ಯಯದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸ್ಥಾಪನೆಗಾಗಿ ಲೆಕ್ಕಶೀರ್ಷಿಕೆ "2215-01-001-1-03" ಅಡಿ **ರೂ.200.00ಲಕ್ಷ** ಅನುದಾನವನ್ನು ಒದಗಿಸಲಾಗಿದೆ. ಅಲ್ಲದೆ ಮೇಲೆ ಓದಲಾದ (3)ರ ಆದೇಶದಲ್ಲಿ ಸದರಿ ಲೆಕ್ಕ ಶೀರ್ಷಿಕೆಯಡಿ ಒದಗಿಸಿರುವ ಅನುದಾನವನ್ನು ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಇವರಿಗೆ ಖಜಾನೆಯಿಂದ ಸೆಳೆಯಲು ಮಂಜೂರಾತಿ ನೀಡಿ ಆದೇಶಿಸಲಾಗಿದೆ. ಪ್ರಸ್ತುತ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ ಕಛೇರಿ ಬೆಂಗಳೂರು, ಗುಣ ನಿಯಂತ್ರಣ ವಿಭಾಗ ಬೆಂಗಳೂರು ಹಾಗೂ ಬೆಂಗಳೂರು (ಗ್ರಾ), ದಾವಣಗೆರೆ, ಚಿತ್ರದುರ್ಗ ಮತ್ತು ಬಳ್ಳಾರಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳು ಕಂಪ್ಯೂಟರ್ ಮತ್ತು ಪೀಠೋಪಕರಣಗಳ ಖರೀದಿಗಾಗಿ **ರೂ.69.00ಲಕ್ಷ** ಅನುದಾನ ಬಿಡುಗಡೆಗಾಗಿ ವಿನಂತಿಸಿದ್ದು, ಈ ಸಂಬಂಧ ಹೊಸ ಇಲಾಖೆಯಡಿ ಸೃಜಿಸಲಾಗಿರುವ ವೃತ್ತ ಕಛೇರಿಗಳು, ವಿಭಾಗಗಳು ಹಾಗೂ ಉಪ ವಿಭಾಗಗಳ ಕಛೇರಿಗಾಗಿ ಕಂಪ್ಯೂಟರ್ ಮತ್ತು ಪೀಠೋಪಕರಣಗಳ ಖರೀದಿಗಾಗಿ **ರೂ.64.00ಲಕ್ಷ** ಅನುದಾನ ಬಿಡುಗಡೆ ಮಾಡಲು CE/RDWSD ಪ್ರಸ್ತಾಪದನ್ವಯ ಸರ್ಕಾರವು ನಿರ್ಧರಿಸಿದೆ. ಆದ್ದರಿಂದ ಈ ಆದೇಶ

### ಸರ್ಕಾರದ ಆದೇಶ ಸಂ.ಗ್ರಾಅಪ/35/ಗ್ರಾನೀಸ(2)2015, ದಿನಾಂಕ:25.03.2015

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ ಹೊಸದಾಗಿ ಸೃಜಿಸಲಾಗಿರುವ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ (RDWSD) ವಿಭಾಗ ಕಛೇರಿಗಳು ಹಾಗೂ ಉಪ ವಿಭಾಗಗಳ ಕಛೇರಿಗಳಿಗೆ ಕಂಪ್ಯೂಟರ್ ಮತ್ತು ಪೀಠೋಪಕರಣಗಳ ಖರೀದಿಗಾಗಿ ಈ ಕೆಳಕಂಡಂತೆ ಜಿಲ್ಲಾವಾರು **ರೂ.64.00ಲಕ್ಷ** (ಅರವತ್ನಾಲ್ಕು ಲಕ್ಷ ರೂಪಾಯಿಗಳು ಮಾತ್ರ) ಅನುದಾನ ಬಿಡುಗಡೆ ಮಾಡಲು ಹರ್ಷಿಸುತ್ತದೆ.

(ರೂ.ಲಕ್ಷಗಳಲ್ಲಿ)

| ಕ್ರ. ಸಂ. | ಕಛೇರಿಯ ಹೆಸರು | ಬಿಡುಗಡೆ ಮಾಡಲಾದ ಕಂಪ್ಯೂಟರ್ ಅನುದಾನ | ಬಿಡುಗಡೆ ಮಾಡಲಾದ ಪೀಠೋಪಕರಣಗಳ ಅನುದಾನ | ಒಟ್ಟು ಬಿಡುಗಡೆ ಮಾಡಲಾದ ಅನುದಾನ |
|---|---|---|---|---|
| 1 | ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಬೆಂಗಳೂರು (ಗ್ರಾಮಾಂತರ) | 10.00 | 5.00 | 15.00 |
| 2 | ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಬೆಂಗಳೂರು (ನಗರ) | 5.00 | 5.00 | 10.00 |
| 3 | ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ದಾವಣಗೆರೆ | 0.00 | 7.00 | 7.00 |
| 4 | ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಚಿತ್ರದುರ್ಗ | 0.00 | 6.00 | 6.00 |
| 5 | ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಬಳ್ಳಾರಿ | **8.00** | **8.00** | **16.00** |
| 6 | ಗುಣನಿಯಂತ್ರಣ ವಿಭಾಗ ಬೆಂಗಳೂರು | **5.00** | **5.00** | **10.00** |
| | ಒಟ್ಟು | **28.00** | **36.00** | **64.00** |

2) ಸದರಿ ಬಿಡುಗಡೆ ಮಾಡಲಾದ ಅನುದಾನವನ್ನು ಅಧೀಕ್ಷಕ ಅಭಿಯಂತರರು, ಮೇಲ್ಕಂಡ ಆರು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳ ಮೇಲೆ ಒದಗಿಸಲಾಗದ ಅನುದಾನದಲ್ಲಿ ಕಂಪ್ಯೂಟರ್ ಹಾಗೂ ಪಿಠೋಪಕರಣಗಳನ್ನು ನಿಯಮಾನುಸಾರ ಖರೀದಿಸಿ ವೆಚ್ಚ ಭರಿಸಲು ಕ್ರಮವಹಿಸಬಹುದಾಗಿದೆ.

3) ಸಂಬಂಧಪಟ್ಟ ಅನುಷ್ಠಾನಾಧಿಕಾರಿಗಳು ಈ ಆದೇಶದನ್ವಯ ಬಿಡುಗಡೆ ಮಾಡಿದ ಹಣವನ್ನು ಖಜಾನೆಯಿಂದ ಪಡೆದ ಬಗ್ಗೆ ಖಜಾನೆ ವೋಚರ್ ಸಂಖ್ಯೆ ಮತ್ತು ದಿನಾಂಕವನ್ನು CE/RDWSD ಹಾಗೂ ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಬೆಂಗಳೂರು ಇವರಿಗೆ ಸಲ್ಲಿಸತಕ್ಕದ್ದು.

4) ಸದರಿ ಅನುದಾನದವನ್ನು ಲೆಕ್ಕ ಶೀರ್ಷಿಕೆ "2215-01-001-1-03" ರಡಿ ಸೆಳೆದು ಭರಿಸುವುದು.

ಈ ಆದೇಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ, ಸಹಮತಿ ಸಂಖ್ಯೆ:ಗ್ರಾಅಪ 209 ಪಿಬಿಎಸ್ 2015, ದಿ:18.03.2015ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

25/3/15

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾ. ಅ. & ಪಂ. ರಾಜ್ ಇಲಾಖೆ
ಇಮೇಲ್:rk3452000@gmail.com
ಫೋನ್:22240508 ಫ್ಯಾಕ್ಸ್:22233175

<u>ಪ್ರತಿಗಳು:</u>

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು(ಎಯು-1)ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ ಬೆಂ.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ವಿಶೇಷಾಧಿಕಾರಿಗಳು (ಜಿಪಂ)ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು,ಆರ್ಥಿಕ ಇಲಾಖೆ, ವಿಧಾನಸೌಧ ಬೆಂ.
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
11. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 1ನೇ ಮಹಡಿ, ಕೆಹೆಚ್‌ಬಿ ಕಾಂಪ್ಲೆಕ್ಸ್, ಕಾವೇರಿ ಭವನ, ಬೆಂಗಳೂರು.-09.
12. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ ಕಛೇರಿ, ಬೆಂಗಳೂರು ಮತ್ತು ಕಲಬುರ್ಗಿ.
13. ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಬೆಂಗಳೂರು (ಗ್ರಾ), ಬೆಂಗಳೂರು (ನ), ದಾವಣಗೆರೆ, ಚಿತ್ರದುರ್ಗ ಮತ್ತು ಬಳ್ಳಾರಿ.
14. ಆಯುಕ್ತರು, ಹಾಗೂ ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ / ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ, ಇವರುಗಳ ಆಪ್ತ ಸಹಾಯಕರು.
15. ನಿರ್ದೇಶಕರು, E-Governance, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
16. ಮ್ಯಾನೇಜರ್, ಕಾರ್ಪೋರೇಷನ್ ಬ್ಯಾಂಕ್, ಸೌತ್ ಎಂಡ್ ರಸ್ತೆ, ಶೇಷಾದ್ರಿಪುರಂ, ಮಲ್ಲೇಶ್ವರಂ, ಬೆಂಗಳೂರು.
17. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು
18. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5ಪ್ರತಿಗಳು)
19. ರಾಜ್ಯ ಪತ್ರಾಗಾರ ಇಲಾಖೆ(ಬಿಡಿ ಪ್ರತಿ ಶಾಖೆ).
20. ಗ್ರಾ.ಅ.ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ-10ಪ್ರತಿಗಳು.
21. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.